**ಹಿರಿಯ ಸಿವಿಲ್ ನ್ಯಾಯಾಧಿಶರು ಮತ್ತು ಜೆಎಂಎಫ್ ಸಿ ರವರ ನ್ಯಾಯಾಲಯ, ದೇವದುರ್ಗ.**

**ಸಿ.ಸಿ. ನಂ.143/2018**

ಪಿರ್ಯಾದುದಾರರು : ಕರ್ನಾಟಕ ರಾಜ್ಯ,
ಜಾಲಹಳ್ಳಿ ಪೊಲೀಸ ಠಾಣೆ.

**ವಿರುದ್ಧ –**

ಆರೋಪಿತರಾದ

3. ಯಲ್ಲಮ್ಮ ಗಂಡ ಹುಲಗಪ್ಪ,
ವಯಸ್ಸುಃ 55 ವರ್ಷಗಳು, ಉಃ ಕೂಲಿಕೆಲಸ,
ಎಲ್ಲರೂ ಸಾಃ ಗಾಜಲದಿನ್ನಿ.

**ದೋಷರೋಪಣೆ**

ಶ್ರೀ. ಸುರೇಶ ಅಣ್ಣಪ್ಪ ಸವದಿ., ಹಿರಿಯ ಸಿವಿಲ್ ನ್ಯಾಯಾಧಿಶರು ಮತ್ತು ಜೆ.ಎಂ. ಎಫ್. ಸಿ ರವರ ನ್ಯಾಯಾಧೀಶರು, ದೇವದುರ್ಗ, ಈ ಮೂಲಕ ಆರೋಪಿತರಾದ ನಿಮ್ಮಗಳ ಮೇಲೆ ಮಾಡುವ ದೋಷಾರೋಪಣೆ ಏನೆಂದರೆ-

ಜಾಲಹಳ್ಳಿ ಪೊಲೀಸ್ ಠಾಣಾ ಸರಹದ್ದು, ದೇವದುರ್ಗ ತಾಲ್ಲೂಕು, ಗಾಜಕಲದಿನ್ನಿ ಗ್ರಾಮದಲ್ಲಿ 1 ನೇ ಆರೋಪಿತನು ಚಾಸಾ-1 ರವರನ್ನು 3-4 ವರ್ಷಗಳ ಹಿಂದೆ ಮದುವೆ ಆಗಿದ್ದು, ಸದರಿ ಚಾಸಾ-1 ರವರಿಗೆ ನೀವು ಮತ್ತು ಇತರೆ ಆರೋಪಿತರು ವಿನಾಕಾರಣ ಮಾನಸಿಕ ಹಾಗೂ ದೈಹಿಕ ಕಿರುಕುಳ ನೀಡಿ ಆ ಮೂಲಕ ಭಾರತ ದಂಡ ಸಂಹಿತೆ ಕಲಂ 498(ಎ) ಸಹವಾಚಕ ಕಲಂ.34 ಅಡಿ ಶಿಕ್ಷಾರ್ಹ ಅಪರಾಧ ಮಾಡಿರುವಿರಿ.

ದಿನಾಂಕ 22.07.2018 ರಂದು ಮಧ್ಯಾಹ್ನ 12.00 ಗಂಟೆ ಸಮಯದಲ್ಲಿ ಚಾಸಾ-1 ಮತ್ತು 4 ರವರು ಮನೆಯಲ್ಲಿದ್ದಾಗ ನಿಮ್ಮಗಳ ಪೈಕಿ 1 ನೇ ಆರೋಪಿತನು ಸಾಕ್ಷಿ-1 ರವರಿಗೆ ಕೈಯಿಂದ ಕಪಾಳಕ್ಕೆ ಹೊಡೆದು ಆ ಮೂಲಕ ಭಾರತ ದಂಡ ಸಂಹಿತೆ ಕಲಂ 323 ಸಹವಾಚಕ ಕಲಂ.34 ಅಡಿ ಶಿಕ್ಷಾರ್ಹ ಅಪರಾಧ ಮಾಡಿರುವಿರಿ.

ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ, ನಿಮ್ಮಗಳ ಪೈಕಿ 2 ನೇ ಆರೋಪಿತನು ಚಾಸಾ-4 ರವರಿಗೆ ಬಕೇಟಿನಿಂದ ಬಲಗೈ ತೋಳಿಗೆ ಹಾಗೂ ತಲೆಗೆ ಹೊಡೆದು ಗಾಯ ಮಾಡಿ ಆ ಮೂಲಕ ಭಾರತ ದಂಡ ಸಂಹಿತೆ ಕಲಂ 324 ಸಹವಾಚಕ ಕಲಂ.34 ಅಡಿ ಶಿಕ್ಷಾರ್ಹ ಅಪರಾಧ ಮಾಡಿರುವಿರಿ.

ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ, ನಿಮ್ಮಗಳ ಪೈಕಿ 2 ನೇ ಆರೋಪಿತನು ಚಾಸಾ-1 ರವರಿಗೆ ಎಲೆ ಸೂಳೆ ನಿನ್ನದು ಬಹಳ ಆಗಿದೆ ಅಂತ ಬೈದು ಸೀರೆ ಹಿಡಿದು ಎಳೆದಾಡಿ ಅಪಮಾನ ಮಾಡಿ ಆ ಮೂಲಕ ಭಾರತ ದಂಡ ಸಂಹಿತೆ ಕಲಂ.354 ಸಹವಾಚಕ ಕಲಂ.34 ಅಡಿ ಶಿಕ್ಷಾರ್ಹ ಅಪರಾಧ ಮಾಡಿರುವಿರಿ.

ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ, ನೀವು ಮತ್ತು ಇತರೆ ಆರೋಪಿತರು ಚಾಸಾ-1 ಮತ್ತು 4 ರವರಿಗೆ ಎಲೇ ಸೂಳೆ, ಬೊಸಡಿ, ಕೋತಿ ಅಂತಾ ಅವಾಚ್ಯ ಶಬ್ದಗಳಿಂದ ಬೈದು ಆ ಮೂಲಕ ಭಾರತ ದಂಡ ಸಂಹಿತೆ ಕಲಂ.504 ಸಹವಾಚಕ ಕಲಂ.149 ಅಡಿ ಶಿಕ್ಷಾರ್ಹ ಅಪರಾಧ ಮಾಡಿರುವಿರಿ.

ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ, ನೀವು ಮತ್ತು ಇತರೆ ಆರೋಪಿತರು ಚಾಸಾ-1 ಮತ್ತು 4 ರವರಿಗೆ ಈ ಸಲ ಉಳಿದುಕೊಂಡಿದ್ದಿರಿ ಮುಂದೊಂದು ದಿನ ನಿಮ್ಮನ್ನು ಜೀವ ಸಹಿತ ಬಿಡುವುದಿಲ್ಲ ಅಂತಾ ಜೀವದ ಬೇದರಿಕೆ ಹಾಕಿ ಆ ಮೂಲಕ ಭಾರತ ದಂಡ ಸಂಹಿತೆ ಕಲಂ.506 ಸಹವಾಚಕ ಕಲಂ.34 ಅಡಿ ಶಿಕ್ಷಾರ್ಹ ಅಪರಾಧ ಮಾಡಿರುವಿರಿ.

ಸದರೀ ಅಪರಾಧಗಳು ಈ ನ್ಯಾಯಾಲಯದ ಸಂಜ್ಞೆಯಲ್ಲಿ ಬರುತ್ತವೆ ಮತ್ತು ಸದರಿ ವಿಚಾರಣೆಯು ನನ್ನ ಸಮಕ್ಷಮ ನಡೆಯಬೇಕೆಂದು ಈ ಮೂಲಕ ನಿರ್ದೇಶಿಸುತ್ತೇನೆ.

(ಈ ದೋಷಾರೋಪಣೆಯನ್ನು ಈ ದಿನ ದಿನಾಂಕಃ 14.08.2025 ರಂದು ಆರೋಪಿತರಿಗೆ ತೆರೆದ ನ್ಯಾಯಾಲಯದಲ್ಲಿ ಕನ್ನಡ ಭಾಷೆಯಲ್ಲಿ ಓದಿ ಹೇಳಿ ಆತನ ಉತ್ತರವನ್ನು ಯಥಾವತ್ತಾಗಿ ದಾಖಲಿಸಿದೆ)

ಓ. ಹೇ. ಕೇ. ಸರಿ ಇದೆ.

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಜೆಎಂಎಫ್ ಸಿ ದೇವದುರ್ಗ.

**ಹಿರಿಯ ಸಿವಿಲ್ ನ್ಯಾಯಾಧಿಶರು ಮತ್ತು ಜೆಎಂಎಫ್ ಸಿ ರವರ ನ್ಯಾಯಾಲಯ,**

**ದೇವದುರ್ಗ.**

**ಸಿ.ಸಿ. ನಂ.143/2018**

ಪಿರ್ಯಾದುದಾರರು : ಕರ್ನಾಟಕ ರಾಜ್ಯ,
ಜಾಲಹಳ್ಳಿ ಪೊಲೀಸ ಠಾಣೆ.

**ವಿರುದ್ಧ –**

ಆರೋಪಿತರಾದ 3. ಯಲ್ಲಮ್ಮ ಗಂಡ ಹುಲಗಪ್ಪ,

**:: ಆಪಾದನೆ ::**

1. ನಿಮಗೆ ಓದಿ ಹೇಳಿದ ಆಪಾದನೆ ಅರ್ಥವಾಯಿತಾ?

ಉತ್ತರಃ-

2. ನೀವು ತಪ್ಪು ಒಪ್ಪಿಕೊಳ್ಳುವಿರೋ ಅಥವಾ ವಿಚಾರಣೆ ಆಗಬೇಕಾ?

ಉತ್ತರಃ-

ಮೇಲಿನ ಹೇಳಿಕೆಯನ್ನು ಆಪಾದಿತರಿಗೆ ತಿಳಿಯುವಂತೆ ಆತನ ಭಾಷೆಯಲ್ಲಿ ಓದಿ, ಹೇಳಿ ತಿಳಿಸಿ ಅವರ ಹೇಳಿಕೆ ಪಡೆದುದಾಗಿ ದೃಢೀಕರಿಸಿರುತ್ತೇನೆ.

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಜೆಎಂಎಫ್‌ಸಿ., ದೇವದುರ್ಗ.

ಆರೋಪಿತರ ಸಹಿ